**OS: 65/2018**
**D.W-1**

**ಹಿರಿಯ ಶ್ರೇಣಿಯ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ ಕೂಡ್ಲಿಗಿ**

ದಿನಾಂಕಃ 01.09.2025 ರಂದು ಸಾಕ್ಷಿದಾರರಿಗೆ, ಸತ್ಯ ಪ್ರತಿಜ್ಞೆ ಬೋಧಿಸಲಾಯಿತು.

**ಮುಖ್ಯ ವಿಚಾರಣೆಃ ಪ್ರತಿವಾದಿ ಪರ ವಕೀಲರಿಂದಃ**

ನಾನು ದಿನಾಂಕ 01.09.2025 ರಂದು ನಮ್ಮ ವಕೀಲರ ಮೂಲಕ, ನನ್ನ ಮುಖ್ಯ ವಿಚಾರಣಾ ಪ್ರಮಾಣ ಪತ್ರವನ್ನು ಹಾಜರು ಪಡಿಸಿದ್ದು, ಅದರಲ್ಲಿ ಬರೆದ ಎಲ್ಲಾ ಮಾಹಿತಿಗಳು ಸತ್ಯವಾಗಿರುತ್ತವೆ. ಅದನ್ನು ಬರೆಯಲು ನಮ್ಮ ವಕೀಲರಿಗೆ ಮಾಹಿತಿಯನ್ನು ನಾನೇ ನೀಡಿರುತ್ತೇನೆ. ಅದರಲ್ಲಿರುವ ಎಲ್ಲಾ ಅಂಶಗಳನ್ನು ಅರ್ಥೈಸಿಕೊಂಡು ಅದಕ್ಕೆ ನಾನು ಸಹಿ ಮಾಡಿರುತ್ತೇನೆ ಹಾಗೂ ಈ ಕೆಳಗೆ ನಮೂದಿಸಿರುವ ದಾಖಲೆಗಳನ್ನು ಹಾಜರುಪಡಿಸಿರುತ್ತೇನೆ.

ನಾನು ದಾವಾ ಆಸ್ತಿಗೆ ಸಂಬಂಧಿಸಿದಂತೆ ಪಹಣಿ ದಾಖಲೆಗಳನ್ನು ಹಾಜರುಪಡಿಸಿದ್ದು ಅವುಗಳನ್ನು ನಿಡಿ- 1 ರಿಂದ 18 ಎಂದು, ದಿಃ 30.01.1997 ರ ಮೂಲ ನೊಂದಾಯಿತ ಕ್ರಯ ಪತ್ರದ ದಾಖಲೆಯನ್ನು ಹಾಜರುಪಡಿಸಿದ್ದು ಅದನ್ನು ನಿಡಿ- 19 ಎಂದು, ದಿಃ 26.03.2010 ರ ನೊಂದಾಯಿತ ಕ್ರಯಪತ್ರದ ದಾಖಲೆಯನ್ನು ಹಾಜರುಪಡಿಸಿದ್ದು ಅದನ್ನು ನಿಡಿ- 20 ಎಂದು, ಪಹಣಿ ದಾಖಲೆಗಳನ್ನು ಹಾಜರುಪಡಿಸಿದ್ದು ಅವುಗಳನ್ನು ನಿಡಿ- 21 ರಿಂದ 34 ಎಂದು ಗುರುತಿಸಲಾಯಿತು.

(ಪಾಟೀ ಸವಾಲಿಗಾಗಿ ಸಮಯಾವಕಾಶ ಕೋರಿದ್ದು, ಸಮಯಾವಕಾಶ ನೀಡಿ ಮುಂದೂಡಲಾಯಿತು.)

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದ ಮೇರೆಗೆ ಬೆರಳಚ್ಚು ಮಾಡಲಾಗಿದೆ).

**ಓ,ಹೇ,ಕೇ,ಸರಿ ಇದೆ.**

**ಹಿ.ಸಿ.ಜೆ ಮತ್ತು ಜೆ.ಎಂ.ಎಫ್.ಸಿ**
**ಕೂಡ್ಲಿಗಿ.**